ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com


ದಿನಾಂಕ: 24.09.2015

## ಪ್ರಕಟಣೆಯ ಕೃಪೆಗಾಗಿ

ದಿನಾಂಕ 24-09-2015 ರಂದು ನಮ್ಮ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ದಿನಾಚರಣೆ ಹಾಗೂ 2015-16ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನಾ ಚಟುವಟಿಕೆಗಳ ಉದ್ಘಾಟನಾ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾಯೋಜನೆಯ ನಿವೃತ್ತ ಸಂಯೋಜನಾಧಿಕಾರಿಗಳಾದ ಪ್ರೊ. ಬಿ.ಕೆ. ಶಿವಣ್ಣನವರು ಗಿಡಕ್ಕೆ ನೀರೆರೆಯುವುದರ ಮೂಲಕ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಎನ್.ಎಸ್.ಎಸ್.ನಿಂದ ಉತ್ತಮ ಸಂಸ್ಕಾರ, ನೈಪುಣ್ಯತೆ, ವ್ಯಕ್ತಿತ್ವ ನಿರ್ಮಾಣ ಸಾಧ್ಯವಾಗುತ್ತದೆ. ಇದು ಸಮಾಜ ಸೇವಾ ಮನೋಭಾವನೆಯನ್ನು ಬೆಳೆಸುವುದರ ಜೊತೆಗೆ ಗ್ರಾಮೀಣ ಪ್ರದೇಶಗಳ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಸಹಕಾರಿಯಾಗುತ್ತದೆ. "ನಾನು ನನಗಾಗಿ ಅಲ್ಲ, ತಮ್ಮೆಲ್ಲರಿಗಾಗಿ" ಎಂಬ ಭಾವನೆಯನ್ನು ಮೂಡಿಸುತ್ತದೆ. ಸ್ವಯಂ ಸೇವಕರಾದವರಿಗೆ ತಮ್ಮ ಕಾಲೇಜು ಹಾಗೂ ಸಂಸ್ಥೆಯ ಬಗ್ಗೆ ಅಭಿಮಾನವಿರಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ನಮ್ಮದು ಯುವಕರ ದೇಶವಾಗಿದೆ. ಯುವಕರು ಎನ್.ಎಸ್.ಎಸ್, ಎನ್.ಸಿ.ಸಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರ ಮೂಲಕ ಸಮುದಾಯದ ಏಳಿಗೆಗೆ ಹಾಗೂ ರಾಷ್ಟ್ರದ ಪ್ರಗತಿಗೆ ಶ್ರಮಿಸಬೇಕೆಂದರು. ಸ್ವಯಂ ಸೇವಕರು ಗಿಡಗಳನ್ನು ನೆಡುವುದು, ರಕ್ತದಾನ ಮಾಡುವುದು, ಗ್ರಾಮೀಣ ಪ್ರದೇಶಗಳಲ್ಲಿನ ಸಮಸ್ಯೆಗಳನ್ನು ಹೋಗಲಾಡಿಸುವುದು ಮೊದಲಾದ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು.

ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ಸ್ವಾಗತಿಸಿದರೆ, ಕಾಲೇಜಿನ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿಗಳಾದ ಶ್ರೀ ಅಭಿಜಿತ್ ಎಂ ಸಿಂಗ್‌ರವರು ವಂದಿಸಿದರು. ಕನ್ನಡ ಉಪನ್ಯಾಸಕರಾದ ಶ್ರೀ ಸಂತೋಷ್‌ಕುಮಾರ್‌ರವರು ನಿರೂಪಿಸಿದರು. ಕಾಲೇಜಿನ ಅಕಾಡೆಮಿಕ್ ಡೀನ್ ಡಾ. ಕೆ.ವಿ. ಸುರೇಶರವರು ಹಾಗೂ ಸ್ವಯಂ ಸೇವಕರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಕಾಲೇಜಿನ ಆವರಣದಲ್ಲಿ ರಾಷ್ಟ್ರೀಯ ಸೇವಾ ದಿನಾಚರಣೆಯ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

(ಪ್ರೊ. ಎಂ. ಮಹದೇವಪ್ಪ)
ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
ಊಟಿ ರಸ್ತೆ, ಮೈಸೂರು-25

ಗೆ
ಸಂಪಾದಕರು

\- - - - - - - - - - -

\- - - - - - - - - - -